# All India Radio: Bangalore
## Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

05.06.2026 2.30 p.m.

<><><><>

ಮುಖ್ಯಾಂಶಗಳು

- ಸಚಿವ ಸ್ಥಾನಕ್ಕೆ ರಾಮಲಿಂಗಾರೆಡ್ಡಿ ರಾಜೀನಾಮೆ ; ಆಹಾರ ಖಾತೆ ಜವಾಬ್ದಾರಿ ವಹಿಸಿಕೊಳ್ಳದಿರಲು ಸಚಿವ ಕೆ.ಎಚ್.ಮುನಿಯಪ್ಪ ನಿರ್ಧಾರ ; ಹಿರಿಯ ನಾಯಕರಿಂದ ಮನವೊಲಿಕೆ ಯತ್ನ
- ರಾಜ್ಯಸಭಾ ಚುನಾವಣೆ ; ವಿಧಾನಸೌಧದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಾಮಪತ್ರ ಸಲ್ಲಿಕೆ
- ಇಂದು ವಿಶ್ವ ಪರಿಸರ ದಿನ ; ಕೂಡ್ಲಿಗಿಯಲ್ಲಿ ಸಾವಯವ ತೋಟಗಾರಿಕಾ ನೆಡುತೋಪು ಯೋಜನೆಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
- ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ಯೋಜನೆ ಜಾರಿಗೊಳಿಸಿ ಸರ್ಕಾರ ಆದೇಶ
- ಕರಾವಳಿ, ಕೊಡಗು ಸೇರಿದಂತೆ ರಾಜ್ಯದ ಹಲವೆಡೆ ಭಾರೀ ಮಳೆ ; ಮೀನುಗಾರಿಕೆಗೆ ನಿಷೇಧ ಹೇರಿದ ದಕ್ಷಿಣ ಕನ್ನಡ ಜಿಲ್ಲಾಡಳಿತ

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡುವುದಾಗಿ ನೀಡಿದ ಭರವಸೆಯಿಂದ ಹಿಂದೆ ಸರಿದಿದ್ದಾರೆ ಎಂದು ಆರೋಪಿಸಿ ಜಲಸಂಪನ್ಮೂಲ ಖಾತೆ ಸಚಿವ ರಾಮಲಿಂಗಾರೆಡ್ಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜೀನಾಮೆಯನ್ನು ಸ್ವೀಕರಿಸಬೇಕೆ ಅಥವಾ ಬೇಡವೇ ಎಂಬುದನ್ನು ನಿರ್ಧರಿಸಲು ಪಕ್ಷದ ನಾಯಕತ್ವಕ್ಕೆ ಬಿಡುವುದಾಗಿ ತಿಳಿಸಿದ್ದಾರೆ. ಈ ಕುರಿತಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದ್ದು, ರಾಮಲಿಂಗಾರೆಡ್ಡಿ ತಮ್ಮ ಆಪ್ತ ಸ್ನೇಹಿತರಾಗಿದ್ದು, ಅವರೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಮಲಿಂಗಾರೆಡ್ಡಿಯವರಿಗೆ ಜಲಸಂಪನ್ಮೂಲ ಖಾತೆ ನೀಡಿದ್ದು, ಅವರು ನಗರ ಪ್ರದೇಶದಲ್ಲಿ ಕಾರ್ಯ ನಿರ್ವಹಿಸಲು ಬಯಸಿರುವುದಾಗಿ ತಿಳಿಸಿದ್ದಾರೆ.

<><><><>

ಸಚಿವ ರಾಮಲಿಂಗಾರೆಡ್ಡಿ ಬಳಿಕ, ಆಹಾರ ಸಚಿವಾಲಯದ ಜವಾಬ್ದಾರಿ ವಹಿಸಿಕೊಳ್ಳಲು ಸಚಿವ ಕೆ.ಎಚ್.ಮುನಿಯಪ್ಪ ನಿರಾಕರಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ

ಅವರು, ಹಿರಿಯ ಸಚಿವರು ಹಾಗೂ ಪಕ್ಷದ ವರಿಷ್ಠರು ತಮಗೆ ಆಗಿರುವ ಅನ್ಯಾಯವನ್ನು ಸರಿಪಡಿಸಲು ಮಧ್ಯಪ್ರವೇಶಿಸುವಂತೆ ಒತ್ತಾಯಿಸಿದ್ದಾರೆ. ತಾವು ಯಾವುದೇ ಕಾರಣಕ್ಕೂ ಸಚಿವ ಸ್ಥಾನದ ಅಧಿಕಾರವನ್ನು ವಹಿಸಿಕೊಳ್ಳುವುದಿಲ್ಲ ಎಂದು ಘೋಷಿಸಿದ್ದಾರೆ. ಪಕ್ಷದ ವರಿಷ್ಠರು ತಮ್ಮ ಹಿರಿತನವನ್ನು ಗುರುತಿಸಬೇಕು ಹಾಗೂ ಖಾತೆ ಹಂಚಿಕೆಯಲ್ಲಿನ ಸಮಸ್ಯೆಗಳನ್ನು ಸರಿಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿರುವ ಕಾಂಗ್ರೆಸ್ ಹಿರಿಯ ನಾಯಕರಾದ ರಾಹುಲ್ ಗಾಂಧಿ, ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಸಂಪುಟದಲ್ಲಿನ ಭಿನ್ನಮತ ಹಾಗೂ ರಾಮಲಿಂಗಾರೆಡ್ಡಿ ರಾಜೀನಾಮೆ ಕುರಿತಂತೆ ಚರ್ಚೆ ನಡೆಸಿದ್ದಾರೆ. ಕೂಡಲೇ ಸಚಿವರ ಅಸಮಾಧಾನವನ್ನು ಬಗೆಹರಿಸುವಂತೆ ಸೂಚನೆ ನೀಡಿದ್ದಾರೆ.

<><><><>

ರಾಜ್ಯ ಸಭಾ ಚುನಾವಣೆಗೆ ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಬೆಂಗಳೂರಿನಲ್ಲಿ ನಾಮಪತ್ರ ಸಲ್ಲಿಸಿದ್ದಾರೆ. ವಿಧಾನಸಭೆ ಕಾರ್ಯದರ್ಶಿ, ಚುನಾವಣಾಧಿಕಾರಿ ವಿಶಾಲಾಕ್ಷಿಗೆ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆ.ಪಿ.ಸಿ.ಸಿ. ಅಧ್ಯಕ್ಷ ಡಿ.ಕೆ.ಹರಿಪ್ರಸಾದ್ ಸೇರಿದಂತೆ ಹಲವು ನಾಯಕರು ಉಪಸ್ಥಿತರಿದ್ದರು. ಜೂನ್ ೧೮ರಂದು ರಾಜ್ಯಸಭೆಗೆ ಚುನಾವಣೆ ನಡೆಯಲಿದೆ.

<><><><>

ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸುವುದು ತಮ್ಮ ಮೊದಲ ಆದ್ಯತೆಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ. ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ೨೫ ವರ್ಷಗಳ ದೀರ್ಘಾವಧಿಗೆ ಭೂ ಮೇಲ್ಮೈ ನೀರು ಬಳಸಿ ಗ್ರಾಮೀಣ ಭಾಗಕ್ಕೆ ಪೂರೈಕೆ ಮಾಡುವುದು ಸರ್ಕಾರದ ಸಂಕಲ್ಪವಾಗಿದ್ದು, ಇದರ ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದ್ದಾರೆ. ನಾಳೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿದ್ದು, ಮುಂದಿನ ಯೋಜನೆ ರೂಪಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ವಿಶ್ವ ಪರಿಸರ ದಿನದ ಹಿನ್ನೆಲೆಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿಜಯನಗರದ ಕೂಡ್ಲಿಗಿ ಸಾವಯವ ತೋಟಗಾರಿಕಾ, ನೆಡುತೋಪು ಯೋಜನೆಗೆ ಚಾಲನೆ ನೀಡಿದರು. ಈ ಯೋಜನೆಯ ಮೊದಲ ಹಂತವು ೧೬೦ ಎಕರೆ ಪ್ರದೇಶವನ್ನು ಒಳಗೊಂಡಿದ್ದು, ೫೦

ಸಾವಿರ ಮರಗಳನ್ನು ನೆಡುವ ಗುರಿ ಹೊಂದಲಾಗಿದೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ನಿರ್ಮಲಾ ಸೀತಾರಾಮನ್ ಕೂಡ್ಲಿಗಿ ಯೋಜನೆಯಲ್ಲಿ ಒಣ ಭೂಮಿಯ ಪರಿಸ್ಥಿತಿಗಳಿಗೆ ಸೂಕ್ತವಾದ ಮರ ಆಧಾರಿತ ಕೃಷಿಯನ್ನು ಉತ್ತೇಜಿಸಲಿದೆ ಎಂದು ಹೇಳಿದ್ದಾರೆ. ಹನಿ ನೀರಾವರಿ, ಹೊದಿಕೆ ವಿಧಾನ, ಮಣ್ಣಿನ ಸಾರವರ್ಧನೆ, ಬೇಲಿ ಅಳವಡಿಕೆ, ನಿರ್ವಹಣೆಯೊಂದಗೆ ಮಣ್ಣಿನ ಆರೋಗ್ಯವನ್ನು ಸುಧಾರಿಸಲು ಸಹಾಯವಾಗಲಿದೆ. ರೈತರಿಗೆ ದೀರ್ಘಾವಧಿಯ ಆದಾಯದ ಅವಕಾಶಗಳನ್ನು ಸೃಷ್ಟಿಸಲು ಸಹಾಯ ಮಾಡಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಅವರು, ಕೂಡ್ಲಿಗಿಯ ಸ್ಥಳೀಯ ಸ್ವಸಹಾಯ ಸಂಘಗಳು, ವೈವಿಧ್ಯಮಯ ಉತ್ಪನ್ನಗಳು ಮತ್ತು ಉದ್ಯಮಶೀಲತೆಯ ಉಪಕ್ರಮದ ಪ್ರದರ್ಶನದ ಮಳಿಗೆಗಳನ್ನು ಉದ್ಘಾಟಿಸಿ ವೀಕ್ಷಿಸಿದರು. ಇದಕ್ಕೂ ಮೊದಲು ಸಚಿವೆ ನಿರ್ಮಲಾ ಸೀತಾರಾಮನ್, ವಿಜಯನಗರ ಜಿಲ್ಲೆ ಹೊಸಪೇಟೆಯ ಟಿ.ಬಿ. ಡ್ಯಾಮ್ ರಸ್ತೆಯ ಜಿಲ್ಲಾಧಿಕಾರಿಗಳ ಕಚೇರಿ ಸಮೀಪ ನಿರ್ಮಾಣವಾಗುತ್ತಿರುವ ನೂತನ ರಂಗಮಂದಿರವಾದ ವಿಜಯನಗರ ಜಿಲ್ಲಾ ಸಾಂಸ್ಕೃತಿಕ ಕೇಂದ್ರಕ್ಕೆ ಶಂಕುಸ್ಥಾಪನೆ ನೆರವೇರಿಸಿದರು. ಈ ಮಂದಿರವು ಮುಕ್ತ ಆಕಾಶ ರಂಗಮಂದಿರ, ಕಲಾ ಗ್ಯಾಲರಿ ಮತ್ತು ಪ್ರದರ್ಶನ ಸಭಾಂಗಣ ಮಿನಿ ಥಿಯೇಟರ್ ಹಾಗೂ ಗ್ರಂಥಾಲಯಗಳನ್ನು ಒಳಗೊಂಡ ಸುಸಜ್ಜಿತ ರಂಗಮಂದಿರವಾಗಿದೆ.

<><><><>

ಇಂದು ಜಗತ್ತಿನಾದ್ಯಂತ ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತಿದೆ. ಭೂಮಿಯ ಮೇಲಿನ ಜೀವ ಉಳಿಸಲು ಹಾಗೂ ಜಾಗೃತಿ ಮೂಡಿಸಲು ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮದ ಭಾಗವಾಗಿ ೧೯೭೩ರಿಂದ ಪ್ರತಿ ವರ್ಷ ಜೂನ್ ೫ ರಂದು ಪರಿಸರ ದಿನ ಆಚರಿಸಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಪರಿಸರದ ಉಳಿವಿಗೆ ಕರೆ ನೀಡಿದ್ದಾರೆ. ಪರಿಸರ ದಿನಾಚರಣೆಯ ಹಿನ್ನೆಲೆಯಲ್ಲಿ ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ಸಂದರ್ಭದಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಗಿಡ ನೆಟ್ಟು ನೀರೆರೆದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಎಂ.ಬಿ.ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಚಿವ ಕೆ.ಎಚ್.ಮುನಿಯಪ್ಪ ಸಸಿ ನೆಡುವ ಮೂಲಕ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು ಪ್ರಾಕೃತಿಕ ಸಮತೋಲನ ಕಾಪಾಡಿಕೊಳ್ಳಬೇಕಾದರೆ, ಭೂ ಪ್ರದೇಶಕ್ಕೆ ಅನುಗುಣವಾಗಿ ಅರಣ್ಯ ಹಾಗೂ ಗಿಡಮರಗಳು ಇರಬೇಕು ಎಂದು ಅಭಿಪ್ರಾಯಪಟ್ಟರು. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕೃಷ್ಣಾ ಭಾಗ್ಯ ಜಲ ನಿಗಮದ ಅರಣ್ಯ ವಿಭಾಗದ ಸಹಯೋಗದಲ್ಲಿ ಸಸಿ ನೆಡುವ ಕಾರ್ಯಕ್ರಮ ಆಯೋಜಿಸಲಾಯಿತು. ಕಾರ್ಯಕ್ರಮಕ್ಕೆ

ಬಿಟಿಡಿಎ ಮುಖ್ಯ ಇಂಜಿನಿಯರ್ ಚಂದ್ರಹಾಸ ಬಂಡಿ ಸಸಿಗೆ ನೀರು ಹಾಕುವ ಮೂಲಕ ಚಾಲನೆ ನೀಡಿದರು. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಸಂರಕ್ಷಣೆ ಮತ್ತು ಹಸಿರು ವಾತಾವರಣ ನಿರ್ಮಾಣದ ಉದ್ದೇಶದಿಂದ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸರ್ಕಾರಿ ಕಟ್ಟಡಗಳ ಆವರಣದಲ್ಲಿ ಸಸಿ ನೆಡುವ ಮೂಲಕ ಹಸಿರೀಕರಣಕ್ಕೆ ಮುಂದಾಗಿರುವುದಾಗಿ ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಸಕ ಸಮರ್ಥ್ ಶಾಮನೂರು ತಿಳಿಸಿದ್ದಾರೆ.

<><><><>

ಕೇರಳಂಗೆ ಮುಂಗಾರು ಪ್ರವೇಶಿಸಿದ್ದು, ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ಕರಾವಳಿ ಕರ್ನಾಟಕ, ಉತ್ತರ ಒಳನಾಡು ಸೇರಿದಂತೆ ಹಲವೆಡೆ ಇಂದು ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿಗೆ ಮುಂಗಾರು ಆಗಮನವಾಗಿದ್ದು, ಇಂದು ಮುಂಜಾನೆಯಿಂದಲೇ ಭಾರೀ ಮಳೆಯಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿಯೂ ಎಡೆಬಿಡದೆ ಮಳೆ ಸುರಿಯುತ್ತಿದೆ. ಸತತ ಮಳೆಯ ಪರಿಣಾಮವಾಗಿ ಮಂಗಳೂರಿನ ಪಂಪ್ ವೆಲ್, ಜಪ್ಪಿನಮೊಗರು, ಕೊಟ್ಟಾರ ಸೇರಿದಂತೆ ಹಲವು ಪ್ರದೇಶಗಳು ಜಲಾವೃತಗೊಂಡಿವೆ. ನಗರದ ರಸ್ತೆಗಳಲ್ಲಿ ಮಳೆನೀರು ತುಂಬಿರುವ ತುಂಬಿದ್ದು, ವಾಹನ ಸವಾರರು, ಪಾದಚಾರಿಗಳ ಸಂಚಾರ ದುಸ್ತರವಾಗಿದೆ. ಮಳೆಗಾಲ ಆರಂಭವಾಗಿರುವುದರಿಂದ ಎರಡು ತಿಂಗಳ ಕಾಲ ಮೀನುಗಾರಿಕೆಗೆ ನಿಷೇಧ ಹೇರಲಾಗಿದ್ದು, ಮೀನುಗಾರರು ನೀರಿಗಿಳಿಯದೆ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ಮಡಿಕೇರಿ ಸೇರಿದಂತೆ ಕೊಡಗಿನ ಬಹುತೇಕ ಕಡೆ ಮಳೆಯಾಗುತ್ತಿದೆ. ಈ ವರ್ಷ ೧೦ ದಿನ ತಡವಾಗಿ ಮುಂಗಾರು ಜಿಲ್ಲೆಗೆ ಪ್ರವೇಶಿಸಿದೆ. ಜಿಲ್ಲಾಡಳಿತ ಮುನ್ನೆಚ್ಚರಿಕಾ ಕ್ರಮವಾಗಿ ಸಕಲ ಸಿದ್ಧತೆ ಕೈಗೊಂಡಿದೆ. ಕೋಲಾರ ಜಿಲ್ಲೆಯ ವೇಮಗಲ್ ಹೋಬಳಿಯಾದ್ಯಂತ ಕಳೆದ ಹಲವು ದಿನಗಳಿಂದ ಉತ್ತಮ ಮಳೆಯಾಗುತ್ತಿದ್ದು, ರೈತರು ಮುಂಗಾರು ಬಿತ್ತನೆಗಾಗಿ ಭೂಮಿಯನ್ನು ಸಿದ್ಧಪಡಿಸುವ ಕಾಯಕದಲ್ಲಿ ನಿರತರಾಗಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>